ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/02/ಇಎಸ್‌ಟಿ(9)/2020-21/659

ಆಯುಕ್ತರವರ ಕಛೇರಿ.
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560 001.
ದಿನಾಂಕ: 23-12-2020.

## ಹಿಂಬರಹ

ಕರ್ನಾಟಕ ಸರ್ಕಾರದ ಸುತ್ತೋಲೆಯ ಪತ್ರ ಸಂಖ್ಯೆ ಸಿಆಸುಇ 129 ರಾಸ 2020 ದಿನಾಂಕ:18/12/2020 ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ.
3. ಆಯುಕ್ತರ ಆಪ್ತ ಶಾಖೆಗೆ
4. ನಿರ್ದೇಶಕರ ಆಪ್ತ ಶಾಖೆಗೆ
5. ಈ ನಿರ್ದೇಶನಾಲಯದ ಇಎಸ್‌ಟಿ(1) ರಿಂದ (10) ವಿಭಾಗಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 129 ರಾಸ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:18.12.2020

3419
22/12/20

## ಸುತ್ತೋಲೆ

**ವಿಷಯ: ಕೋವಿಡ್- 19ರ ಸೋಂಕು ತಡೆಗಟ್ಟುವ ಸಲುವಾಗಿ ನಿಯೋಜಿಸಲಾಗಿರುವ ಅಧಿಕಾರಿ/ನೌಕರರುಗಳ ಕರ್ತವ್ಯ ನಿರ್ವಹಣೆಯ ಬಗ್ಗೆ.**

****

ಕೋವಿಡ್-19ರ ಸೋಂಕು ನಿಯಂತ್ರಣ ತಡೆಗಟ್ಟುವ ಸಲುವಾಗಿ, ರಾಜ್ಯದ ವಿವಿಧ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ ನೌಕರರುಗಳನ್ನು ನಿಯೋಜಿಸಲಾಗಿದ್ದು, ಸದರಿ ಅಧಿಕಾರಿ/ನೌಕರರುಗಳ ನಿಯೋಜನೆಯನ್ನು ಮುಂದುವರೆಸುವ ಅವಶ್ಯಕತೆ ಇದೆ. ಅದರೊಂದಿಗೆ ಅವರ ಮಾತೃ ಇಲಾಖೆಗಳಲ್ಲಿನ ಸಾರ್ವಜನಿಕ ಕೆಲಸ ಕಾರ್ಯಗಳನ್ನೂ ನಿರ್ವಹಿಸುವ ಅನಿವಾರ್ಯತೆ ಇರುತ್ತದೆಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ಆದೇಶಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ, ರಾಜ್ಯದ ವಿವಿಧ ಇಲಾಖೆಗಳಿಂದ ಕೋವಿಡ್-19 ಕರ್ತವ್ಯಗಳಿಗೆ ನಿಯೋಜಿಸಲ್ಪಟ್ಟು ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳು ಇನ್ನುಮುಂದೆ ವಾರದಲ್ಲಿ ನಿರಂತರ 3 ದಿನಗಳ ಕಾಲ ತಮ್ಮ ಮಾತೃ ಇಲಾಖೆಯ ನಿಯಮಿತ ಕೆಲಸವನ್ನು ಮಾಡಲು ಮತ್ತು ಉಳಿದ ನಾಲ್ಕು ದಿನಗಳು ಕೋವಿಡ್-19ರ ಕರ್ತವ್ಯಗಳನ್ನು ನಿರ್ವಹಿಸುವಂತೆ ಈ ಮೂಲಕ ಸೂಚಿಸಿದೆ.

ಈ ಮೇಲಿನಂತೆ ಕರ್ತವ್ಯ ನಿರ್ವಹಿಸಲು ಅನುವಾಗುವಂತೆ, ಬಿಬಿಎಂಪಿ ವ್ಯಾಪ್ತಿಗೆ ಸಂಬಂಧಿಸಿದಂತೆ ವಲಯ ಸಂಯೋಜಕರು ಮತ್ತು ಜಿಲ್ಲೆಗಳಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು, ಪ್ರತಿ ಅಧಿಕಾರಿ/ಸಿಬ್ಬಂದಿಗಳು ಅವರ ಮಾತೃ ಇಲಾಖೆಯ ನಿಯಮಿತ ಕೆಲಸಗಳನ್ನು ಮಾಡುವ 03 ದಿನಗಳನ್ನು ನಿರ್ಧರಿಸತಕ್ಕದ್ದು.

1227

EST-04

18/12/2020

(ಬಿ.ನಾಗಭೂಷಣ್)
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ

ಇವರಿಗೆ :

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು
3. ಎಲ್ಲಾ ಜಿಲ್ಲಾಧಿಕಾರಿಗಳು
4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು
5. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,
6. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ